Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in principal@klsvdit.edu.in**

Date: 12-01-2022

**ಪತ್ರಿಕಾ ಪ್ರಕಟಣೆ:**

## ರಾಷ್ಟ್ರೀಯ ಯುವ ದಿನ ಆಚರಣೆ

ಕರ್ನಾಟಕ ಲಾ ಸೊಸೈಟಿಯ ವಿಶ್ವನಾಥರಾವ್ ದೇಶಪಾಂಡೆ ತಾಂತ್ರಿಕ ಮಹಾವಿದ್ಯಾಲಯ, ಹಳಿಯಾಳದಲ್ಲಿ ಜನವರಿ 12 ರಂದು ಸ್ವಾಮಿ ವಿವೇಕಾನಂದರ ಜಯಂತಿ ಪ್ರಯುಕ್ತ ರಾಷ್ಟ್ರೀಯ ಯುವ ದಿನಾಚರಣೆ ಆಚರಿಸಲಾಯಿತು. ಈ ಪ್ರಯುಕ್ತ ವಿದ್ಯಾರ್ಥಿಗಳಿಗೆ "ಸ್ವಾಮಿ ವಿವೇಕಾನಂದರ ಸಂದೇಶಗಳಲ್ಲಿರುವ ನಾಯಕ ಗುಣ ಮತ್ತು ವ್ಯಕ್ತಿತ್ವ ವಿಕಸನ" ಎಂಬ ವಿಷಯದ ಕುರಿತು ಚರ್ಚಾ ಸ್ಪರ್ಧೆ ಮತ್ತು ಭಿತ್ತಿ ಚಿತ್ರ ಸ್ಪರ್ಧೆ ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ವಿ ಎ ಕುಲಕರ್ಣಿ ಅವರು ಸ್ವಾಮಿ ವಿವೇಕಾನಂದರ ಭಾವ ಚಿತ್ರಕ್ಕೆ ಪೂಜೆ ಸಲ್ಲಿಸಿ ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡುತ್ತ ವಿವೇಕಾನಂದರ ಜೀವನಾದರ್ಶಗಳು ಇಂದಿನ ಯುವ ಜನತೆಗೆ ಮಾದರಿಯಾಗಿವೆ. ಅವರ ಬೋಧನೆಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಯಶಸ್ಸು ಹೊಂದಬೇಕೆಂದು ಕರೆ ನೀಡಿದರು. ಚರ್ಚಾ ಸ್ಪರ್ಧೆ ಮತ್ತು ಭಿತ್ತಿ ಚಿತ್ರ ಸ್ಪರ್ಧೆಯಲ್ಲಿ 30 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಎನ್. ಎಸ್. ಎಸ್ ಘಟಕ ಸಂಚಾಲಕರಾದ ಪ್ರೊ. ವಿ ಎಮ್ ಚೌಗುಲಾ ಸ್ವಾಗತಿಸಿದರು. ಪ್ರೊ. ಸಚಿನ್ ಸೊಂಡೂರ್ ನಿರೂಪಿಸಿದರು. ಮಹಾವಿದ್ಯಾಲಯದ ಆಡಳಿತ ವಿಭಾಗ ಮುಖ್ಯಸ್ಥರಾದ ಪ್ರೊ. ಮಂಜುನಾಥ ಡಿ, ಶಿಕ್ಷಣ ಸಂಯೋಜಕರಾದ ಡಾ. ಆರ್ ಎಸ್ ಮುನ್ನೊಳ್ಳಿ, ಎಲ್ಲ ವಿಭಾಗಗಳ ಮುಖ್ಯಸ್ಥರು ಮತ್ತು ವಿದ್ಯಾರ್ಥಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಪ್ರಾಂಶುಪಾಲರು

Principal
KLS Vishwanathrao Deshpande
Institute of Technology, Haliyal


KLS
VDIT




KLS


KLS






WHAT GIVES
INDIA
THE EDGE OVER
THE WORLD
IT'S
YOU(TH).
MAITRI. M. S
EC 'B' DIV


NATIONAL
YOUTH
DAY


National Youth
Day!
NATIONAL